ಕರ್ನಾಟಕ ಸರ್ಕಾರ

No: BCWD-16019/9/2017-BCWD_TRAINING-BCWD (36850) ಆಯುಕ್ತರ ಕಛೇರಿ

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ನಂ.16-ಡಿ, ದೇವರಾಜ ಅರಸು ಭವನ, 3ನೇ ಮಹಡಿ,
ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ, ವಸಂತ ನಗರ,
ಬೆಂಗಳೂರು-560 052, ದಿನಾಂಕ: 15.12.2017.

## ಪೂರ್ಣಾವಧಿ ಪಿಎಚ್.ಡಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ವ್ಯಾಸಂಗ ವೇತನ/ಫೆಲೋಶಿಪ್ ಮತ್ತು ಶುಲ್ಕ ವಿನಾಯಿತಿ ಮಂಜೂರಾತಿಗಾಗಿ ಅರ್ಜಿ ಸಲ್ಲಿಸುವ ದಿನಾಂಕ ವಿಸ್ತರಣೆ

2017-18ನೇ ಸಾಲಿನಲ್ಲಿ ಪೂರ್ಣಾವಧಿ ಪಿಎಚ್.ಡಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ಪ್ರವರ್ಗ-I, II(ಎ), III(ಎ), III(ಬಿ) ಹಾಗೂ Other OBC ಗೆ ಸೇರಿದ ಅರ್ಹ ವಿದ್ಯಾರ್ಥಿಗಳಿಗೆ ಇಲಾಖೆಯಿಂದ ನೀಡುವ ಮಾಸಿಕ ರೂ.5,000/- ವ್ಯಾಸಂಗ ವೇತನ/ಫೆಲೋಶಿಪ್ ಹಾಗೂ ನಿಗದಿತ ಶುಲ್ಕ ವಿನಾಯಿತಿಗಾಗಿ ಈ ಹಿಂದೆ ಆಯ್ಕೆಯಾಗಿದ್ದು, ಪ್ರಸ್ತುತ ಸಾಲಿನಲ್ಲಿ ಮುಂದುವರಿಯುತ್ತಿರುವ ಅರ್ಹ ನವೀಕರಣ ವಿದ್ಯಾರ್ಥಿಗಳು ಹಾಗೂ ದಿನಾಂಕ:01.04.2017 ರಿಂದೀಚೆಗೆ ಪ್ರಥಮ ವರ್ಷದಲ್ಲಿ ಪೂರ್ಣಾವಧಿ ಪಿಎಚ್.ಡಿ ಅಧ್ಯಯನದಲ್ಲಿ ತೊಡಗಿರುವ ವಿದ್ಯಾರ್ಥಿಗಳಿಂದ ಈ ಮೊದಲು online ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು. ದಿನಾಂಕ:01.04.2017 ರಿಂದ ಹಿಂದೆ ಪೂರ್ಣಾವಧಿ ಪಿಎಚ್.ಡಿ ಅಧ್ಯಯನದಲ್ಲಿ ತೊಡಗಿರುವ ಪ್ರಥಮ ವರ್ಷದ ವಿದ್ಯಾರ್ಥಿಗಳು ಸಹ ಈಗ ಅರ್ಜಿ ಸಲ್ಲಿಸಬಹುದಾಗಿದೆ. ಅದೇ ರೀತಿ 2, 3 ಮತ್ತು 4ನೇ ವರ್ಷದಲ್ಲಿ ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳು ಈ ಮೊದಲು ಈ ಕಾರ್ಯಕ್ರಮದಡಿ ಅರ್ಜಿ ಸಲ್ಲಿಸದಿದ್ದಲ್ಲಿ, ಈಗ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸುವ ದಿನಾಂಕವನ್ನು **23.12.2017** ರವರೆಗೆ ವಿಸ್ತರಿಸಲಾಗಿದ್ದು, ಹೆಚ್ಚಿನ ವಿವರಗಳಿಗಾಗಿ ಇಲಾಖಾ ವೆಬ್‌ಸೈಟ್ www.backwardclasses.kar.nic.in ಅನ್ನು ನೋಡಬಹುದು.

ಆಯುಕ್ತರು,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ಬೆಂಗಳೂರು.

F:\T\2017-18\T-2\phd\CR-9 36850 2017-18.docx